ಕೈಗಾರಿಕಾ ಶೆಡ್‌ಗಳು

660 (830) ಶ್ರೀ ಮುನಿರಾಜು. ಎಸ್ (ದಾಸರಹಳ್ಳಿ) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಕೆಐಎಡಿಬಿ ವತಿಯಿಂದ ಫೀಣ್ಯ 2ನೇ ಹಂತದಲ್ಲಿ ಎಷ್ಟು ಕೈಗಾರಿಕಾ ಶೆಡ್‌ಗಳನ್ನು ಮಂಜೂರು ಮಾಡಲಾಗಿದೆ;

ಆ) ಕೈಗಾರಿಕಾ ಶೆಡ್‌ಗಳನ್ನು ಮಂಜೂರು ಮಾಡುವಾಗ ಬಡಾವಣೆಯ ಅವಶ್ಯಕತೆಗೆ ಬೇಕಾಗುವ ಬಸ್ ನಿಲ್ದಾಣ, ರಸ್ತೆ, ಮುಂತಾದ ಸೌಲಭ್ಯಗಳಿಗೆ ಸ್ಥಳವನ್ನು ಕಾಯ್ದಿರಿಸಲಾಗಿದೆಯೇ (ಸ್ಥಳಗಳು ಹಾಗೂ ವಿಸ್ತೀರ್ಣದ ವಿವರ ನೀಡುವುದು);

ಇ) ಕಾಯ್ದಿರಿಸಿದ್ದಲ್ಲಿ, ಸದರಿ ಉದ್ದೇಶಕ್ಕಾಗಿ ಉಪಯೋಗಿಸ ಲಾಗಿದೆಯೇ?

ಶ್ರೀ ಮುರುಗೇಶ್ ಆರ್. ನಿರಾಣಿ (ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು) :

ಅ) ಕೆಐಎಡಿಬಿ ವತಿಯಿಂದ ಫೀಣ್ಯ 2ನೇ ಹಂತದಲ್ಲಿ ಕೈಗಾರಿಕಾ ಶೆಡ್‌ಗಳನ್ನು ನಿರ್ಮಾಣ ಮಾಡಿರುವುದಿಲ್ಲ.

ಆ) ಪ್ರಶ್ನೆ ಉದ್ಭವಿಸುವುದಿಲ್ಲ.

ಇ) ಪ್ರಶ್ನೆ ಉದ್ಭವಿಸುವುದಿಲ್ಲ.

ಹುಣಸೂರು ತಾಲ್ಲೂಕಿನ ಕೈಗಾರಿಕಾ ಪ್ಲಾಟ್‌ಗಳು

657 (837) ಶ್ರೀ ಮಂಜುನಾಥ್ ಹೆಚ್.ಪಿ. (ಹುಣಸೂರು) : ಮಾನ್ಯ ಬೃಹತ್ ಮತ್ತು ಮಧ್ಯಮ ಕೈಗಾರಿಕಾ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಮೈಸೂರು ಜಿಲ್ಲೆ, ಹುಣಸೂರು ತಾಲ್ಲೂಕಿನಲ್ಲಿ ಕೈಗಾರಿಕಾ ಪ್ರದೇಶಾಭಿವೃದ್ಧಿ ಮಂಡಳಿಯಿಂದ ಕೈಗಾರಿಕೆ ಅಭಿವೃದ್ಧಿಗಾಗಿ ಸ್ವಾಧೀನಪಡಿಸಿ ಕೊಂಡಿರುವ ಜಮೀನು ಎಷ್ಟು (ಗ್ರಾಮ, ಮಾಲೀಕರ ಹೆಸರು, ಸರ್ವೆ ನಂಬರ್, ವಿಸ್ತೀರ್ಣವಾರು ವಿವರ ನೀಡುವುದು)?